# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಮ್ಯಾನೇಜ್‌ಮೆಂಟ್ ಕೋಟಾದಡಿ ಆಯ್ಕೆಯಾದ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಗೆ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ ಶುಲ್ಕ ಪಾವತಿ ಮಾಡಲು ಅರ್ಹತೆ ಕಲ್ಪಿಸುವ ಬಗ್ಗೆ

ಉಲ್ಲೇಖ:
1. ಸರ್ಕಾರದ ಆದೇಶ ಸಂಖ್ಯೆ: ಸಕಇ 80 ಪಕವಿ 2013 ದಿನಾಂಕ: 02-07-2013
2. ಸರ್ಕಾರದ ಆದೇಶ ಸಂಖ್ಯೆ: ಸಕಇ 178 ಪಕವಿ 2015 ದಿನಾಂಕ: 31-12-2015
3. ಸರ್ಕಾರದ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ದಿನಾಂಕ: 09-03-2017 ರಂದು ನಡೆದ ಸಭೆಯ ನಡವಳಿಗಳು.
4. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಇವರ ಏಕ ಕಡತ ಸಂಖ್ಯೆ: ಸಕನಿ/ಇಡಿ-03/ಸಿಆರ್-02/2017-18, ದಿನಾಂಕ:10-04-2017.

ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು
ಕ್ರ. ಸಂ. ... 4
ದಿನಾಂಕ 6/4/17
ಅ.ನಿ | ಪ.ನಿ | ಶಾಖೆ:
ಉ.ನಿ | ಶಾಖೆ: | ಶಾಖೆ:

********

**ಪ್ರಸ್ತಾವನೆ:**

ಮೇಲೆ ಕ್ರಮಾಂಕ (1) ರಲ್ಲಿ ಓದಲಾದ ದಿನಾಂಕ: 02-07-2013 ರ ಸರ್ಕಾರದ ಆದೇಶದಲ್ಲಿ ಕೇಂದ್ರ ಪುರಸ್ಕೃತ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ ಪಡೆಯುತ್ತಿರುವ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳ ಪೋಷಕರ ಆದಾಯ ಮಿತಿಯನ್ನು 2013-14 ನೇ ಸಾಲಿನ ಶೈಕ್ಷಣಿಕ ಸಾಲಿನಿಂದ ಅನ್ವಯವಾಗುವಂತೆ ರೂ.2.00 ಲಕ್ಷದಿಂದ ರೂ.2.50 ಲಕ್ಷಗಳಿಗೆ ಹೆಚ್ಚಿಸಿ ಆದೇಶಿಸಲಾಗಿದೆ.

ಮೇಲೆ ಕ್ರಮಾಂಕ (2) ರಲ್ಲಿ ಓದಲಾದ ದಿನಾಂಕ: 31-12-2015 ರ ಸರ್ಕಾರದ ಆದೇಶದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಮೆಟ್ರಿಕ್ ನಂತರದ ವಿದ್ಯಾರ್ಥಿಗಳ ಶುಲ್ಕ ಮರುಪಾವತಿ ಸಂಬಂಧ ಆದೇಶ ಹೊರಡಿಸಲಾಗಿದೆ. ಈ ಆದೇಶದಲ್ಲಿ ಡೋನೇಷನ್ ಸೀಟು ಕೋಟಾದಡಿಯಲ್ಲಿ ಪ್ರವೇಶ ಪಡೆದವರು ಶುಲ್ಕ ಮಂಜೂರಾತಿ/ ಮರುಪಾವತಿಗೆ ಅರ್ಹರಿರುವುದಿಲ್ಲವೆಂದು ಷರತ್ತು ವಿಧಿಸಲಾಗಿದೆ.

ಮೇಲೆ ಕ್ರಮಾಂಕ (3) ರಲ್ಲಿ ಓದಲಾದ ದಿನಾಂಕ: 09-03-2017 ರಂದು ಸರ್ಕಾರದ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ನಡೆದ ಎಂ.ಎಂ.ಆರ್. ಸಭೆಯಲ್ಲಿ ಮ್ಯಾನೇಜ್‌ಮೆಂಟ್ ಕೋಟಾದಡಿ ಆಯ್ಕೆಯಾದ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಗೆ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ ಶುಲ್ಕ ಪಾವತಿ ಮಾಡಲು ಅರ್ಹತೆ ಕಲ್ಪಿಸುವ ಬಗ್ಗೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲು ತೀರ್ಮಾನಿಸಲಾಗಿದೆ.

ಮೇಲೆ ಕ್ರಮಾಂಕ (4) ರಲ್ಲಿ ಓದಲಾದ ದಿನಾಂಕ: 10-04-2017 ರ ಏಕ ಕಡತದಲ್ಲಿ ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ಇವರು ಮೆಟ್ರಿಕ್ ನಂತರದ ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ಮಂಜೂರಾತಿ ಕಾರ್ಯಕ್ರಮ ಕೇಂದ್ರ ಪುರಸ್ಕೃತ ಯೋಜನೆಯಾಗಿದ್ದು, ಇದರ ನಿಯಮಗಳು ಹಾಗೂ ಅರ್ಹತೆಗಳನ್ನು ಕೇಂದ್ರ ಸರ್ಕಾರವು ನಿಗದಿಪಡಿಸಿರುತ್ತದೆ. ಸದರಿ ವಿದ್ಯಾರ್ಥಿಗಳು ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನಕ್ಕಾಗಿ ಅರ್ಜಿ ಸಲ್ಲಿಸಲು ಎಲ್ಲಾ ಮೂಲಗಳಿಂದ ವಾರ್ಷಿಕ ಕುಟುಂಬದ ಆದಾಯ ರೂ.2.50 ಲಕ್ಷಗಳ ಮಿತಿಗೊಳಪಟ್ಟಿರಬೇಕು. ಪರಿಶಿಷ್ಟ ಜಾತಿ ಕುಟುಂಬಗಳ ವಿದ್ಯಾರ್ಥಿಗಳಿಗೆ ಮಾತ್ರ ಮ್ಯಾನೇಜ್‌ಮೆಂಟ್ ಕೋಟಾದ ಮೂಲಕ ಸೇರ್ಪಡೆಯಾದ ವಿದ್ಯಾರ್ಥಿಗಳಿಗೆ ಸರ್ಕಾರದ ಆದೇಶ ಸಂಖ್ಯೆ:

24.4.17

Scanned with CamScanner

(2)



ಸಕಇ 178 ಪಕವಿ 2015, ದಿನಾಂಕ: 31-12-2015 ರನ್ವಯ ಅರ್ಜಿ ಸಲ್ಲಿಸಲು ಅರ್ಹತೆ ಇರುವುದಿಲ್ಲ. ಈ ಹಿನ್ನೆಲೆಯಲ್ಲಿ ಹಲವಾರು ವಿದ್ಯಾರ್ಥಿಗಳು ಅವರ ಆದಾಯ ಕಡಿಮೆಯಿದ್ದರೂ ಸಹ ಅವರು ಮ್ಯಾನೇಜ್‌ಮೆಂಟ್ ಕೋಟಾದಲ್ಲಿ ನೇರವಾಗಿ ಒಂದು ವೇಳೆ ಕಾಲೇಜಿಗೆ ಪ್ರವೇಶ ಪಡೆದಿದ್ದರೆ ಅಂತಹವರು ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ ಸೌಲಭ್ಯ ಪಡೆಯಲು ವಂಚಿತರಾಗಿರುತ್ತಾರೆ. ಹೀಗಾಗಿ ಮ್ಯಾನೇಜ್‌ಮೆಂಟ್ ಕೋಟಾದಲ್ಲಿ ಸೇರ್ಪಡೆಯಾಗಿರುವ ಅಭ್ಯರ್ಥಿಗಳಿಗೂ ಸಹ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ ಪಡೆಯಲು ಅವಕಾಶ ಕಲ್ಪಿಸಿ, ಕೆಲವು ಷರತ್ತುಗಳಿಗೊಳಪಡಿಸಿ ಆದೇಶ ಹೊರಡಿಸುವಂತೆ ಕೋರಿದ್ದಾರೆ.

ಮ್ಯಾನೇಜ್‌ಮೆಂಟ್ ಕೋಟಾದಡಿ ಆಯ್ಕೆಯಾದ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಗೆ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ ಶುಲ್ಕ ಪಾವತಿ ಮಾಡಲು ಅರ್ಹತೆ ಕಲ್ಪಿಸಲು ಸರ್ಕಾರವು ನಿರ್ಧರಿಸಿದೆ. ಆದುದರಿಂದ ಈ ಕೆಳಕಂಡ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ: ಸಕಇ 288 ಪಕವಿ 2017, ಬೆಂಗಳೂರು ದಿನಾಂಕ: 24-04-2017</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸಮಾಜ ಕಲ್ಯಾಣ ಇಲಾಖೆಯಿಂದ ಅನುಷ್ಠಾನಗೊಳಿಸುತ್ತಿರುವ ಮೆಟ್ರಿಕ್ ನಂತರದ ಶುಲ್ಕ ಮರುಪಾವತಿ ಕಾರ್ಯಕ್ರಮಕ್ಕೆ ಮ್ಯಾನೇಜ್‌ಮೆಂಟ್ ಕೋಟಾದಡಿ ಆಯ್ಕೆಯಾದ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳು ಈ ಕೆಳಕಂಡ ಷರತ್ತುಗಳನ್ನು ಪೂರೈಸಿದಲ್ಲಿ ವಿದ್ಯಾರ್ಥಿ ವೇತನ ಶುಲ್ಕ ಪಾವತಿ ಮಾಡಲು ಅರ್ಹತೆ ಪಡೆದಿರುತ್ತಾರೆಂದು ಆದೇಶಿಸಿದೆ.

1. ಭಾರತ ಸರ್ಕಾರದ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ ಪಡೆಯಲು ನಿಗದಿಪಡಿಸಿರುವ ಆದಾಯಮಿತಿ ಹಾಗೂ ಇತರೆ ಎಲ್ಲಾ ಅರ್ಹತೆಗಳನ್ನು ಪೂರೈಸತಕ್ಕದ್ದು.
2. ಮ್ಯಾನೇಜ್‌ಮೆಂಟ್ ಕೋಟಾದಡಿ ಸೀಟು ಪಡೆದಿರುವ ವಿದ್ಯಾರ್ಥಿಗಳ ಕುಟುಂಬದ ಆದಾಯವನ್ನು ಮಂಜೂರಾತಿ ಪ್ರಾಧಿಕಾರಿಗಳು ಸುಧೀರ್ಘವಾಗಿ ಪರಿಶೀಲಿಸಿ, ತದನಂತರ ವಿದ್ಯಾರ್ಥಿ ವೇತನವನ್ನು ಮಂಜೂರು ಮಾಡತಕ್ಕದ್ದು.
3. ಮ್ಯಾನೇಜ್‌ಮೆಂಟ್ ಕೋಟಾದಡಿ ಡೊನೇಷನ್ ಸೀಟನ್ನು ಪಡೆದಿರಬಾರದು.
4. ವಿದ್ಯಾರ್ಥಿ ವೇತನದಲ್ಲಿ ಶುಲ್ಕವನ್ನು ಪಾವತಿ ಮಾಡುವಾಗ ವಿದ್ಯಾರ್ಥಿಯು ವ್ಯಾಸಂಗ ಮಾಡುತ್ತಿರುವ ಕೋರ್ಸ್‌ಗೆ ಸರ್ಕಾರಿ ಸೀಟುಗಳಿಗೆ ನಿಗದಿಪಡಿಸಿದ ಶುಲ್ಕದ ಮೊತ್ತವನ್ನು ಮಾತ್ರ ಪಾವತಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

24/4/2017
(ಗಿರಿಜಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ-1,
ಸಮಾಜ ಕಲ್ಯಾಣ ಇಲಾಖೆ.

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.

Scanned with CamScanner